# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

## ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 24.05.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 4 | ಸುರೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 5 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) |
| 6 | ಕುಮಾರ ಆರ್ ಬಿ | ಸ್ವಯಂ ಸೇವಕರು |
| 7 | ಡಾ.ಎಂ.ಎಲ್ ರವಿಕುಮಾರ್ | ಎಂ.ಓ.ಎಚ್ |
| 8 | ಡಾ.ಸುಷ್ಮಿತ ಎನ್ | ಕೋವಿಡ್-19 ವೈದ್ಯಾಧಿಕಾರಿ |

**:ನಡಾವಳಿಯ ವರದಿ:**

- ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **ಕೋವಿಡ್-19, ಸಾಂಕ್ರಾಮಿಕ ರೋಗದ ಬಗ್ಗೆ**
  - ವಾರ್ ರೂಂ ಮತ್ತು Triage Center ಗಳನ್ನು ಸರ್ಕಾರಿ ಪ್ರೌಢಶಾಲೆಯ ಕಟ್ಟಡದಲ್ಲಿ ಸ್ಥಾಪಿಸಿ ದಿನಾಂಕ:19/05/2021ರಂದು ಕಾರ್ಯಾರಂಭ ಮಾಡಿದ್ದು, ಆಮ್ಲಜನಕ ಪೂರೈಕೆ ಇರುವ ಎರಡು ಹಾಸಿಗೆಗಳ ಸೌಲಭ್ಯವಿರುತ್ತದೆ ಹಾಗೂ ಸಾಕಷ್ಟು ಸಂಖ್ಯೆಯಲ್ಲಿ ಔಷಧಿಗಳ ಕಿಟ್‌ಗಳನ್ನು ಒದಗಿಸಲಾಗಿರುತ್ತದೆ.
  - ಸ್ವಯಂ ಸೇವಕರ ಪೈಕಿ ಇಬ್ಬರ ಹಾಜರಿದ್ದು, ಸದರಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ.

- ಲಸಿಕಾಕರಣ ಕೇಂದ್ರವನ್ನು ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಬೇರ್ಪಡಿಸಿ ಹೆಗ್ಗನಹಳ್ಳಿ ಮುಖ್ಯರಸ್ತೆಯಲ್ಲಿರುವ ಸರ್ಕಾರಿ ಶಾಲಾ ಕಟ್ಟಡದಲ್ಲಿ ನಿರ್ವಹಿಸಲು ತೀರ್ಮಾನಿಸಲಾಗಿ ಕಾರ್ಯಾರಂಭ ಮಾಡಲಾಗಿದೆ.
- ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ-ವಾರ್ಡ್ ನಂ.71, ರವರು ವಾರ್ಡ್ ಸಮಿತಿ ಸದಸ್ಯರಲ್ಲಿ ಹೆಚ್ಚಿನ ಸಂಖ್ಯೆ ಸ್ವಯಂ ಸೇವಕರನ್ನು ಗುರುತಿಸಿ ನೋಂದಾಯಿಸಲು ಕೋರಲಾಯಿತು.
- ವಾರ್ ರೂಂ ಮತ್ತು Triage Center ಕೇಂದ್ರಗಳಲ್ಲಿ ಹೆಗ್ಗನಹಳ್ಳಿ ಹಾಗೂ ರಾಜಗೋಪಾಲನಗರ ಎರಡೂ ವಾರ್ಡ್‌ಗಳಿಂದ ಒಂದು Ambulance ಒದಗಿಸಲಾಗಿರುತ್ತದೆ. ಹೆಚ್ಚುವರಿ Ambulance ಅಗತ್ಯವಿದ್ದಲ್ಲಿ ವಲಯ ಕಛೇರಿಯಿಂದ ಪಡೆಯಲು ಸೂಚಿಸಲಾಯಿತು.

ವಾರ್ಡ್ ನಂ.71ರ ವ್ಯಾಪ್ತಿಯಲ್ಲಿ ಕೋವಿಡ್-19 ಸಂಬಂಧಪಟ್ಟ ವಿವರಗಳನ್ನು ಸಭೆಯಲ್ಲಿ ತಿಳಿಸಲಾಯಿತು. ಸದರಿ ವಿವರ ಈ ಕೆಳಕಂಡಂತಿದೆ.

NO OF RT-PCR TESTED FROM 1/05/2021 to 24/05/2021 = 3941
NO OF +VES IN RT-PCR = 1731
NO OF RAPID ANTIGEN TEST DONE FROM 1/04/2021 = 206
NO OF +VES IN RAPID ANTIGEN TEST = 74
NO OF VACCINATED FROM 01/05/2021 = 1848
NO OF HOME ISOLATED = 1656
NO OF HOSPITALIZED = 140
NO OF MEDICAL KITS DISTRIBUTED FROM 1/05/2021 = 1086
NO OF CONTRACT TRACING = 1782

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ಕೋವಿಡ್-19 ಸಾಂಕ್ರಾಮಿಕವನ್ನು ವಾರ್ಡ್ ಮಟ್ಟದಲ್ಲಿಯೇ ಪರಿಹರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಮಂಜುನಾಥ್ ಡಿ ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ-ವಾರ್ಡ್ 71 ಹಾಗೂ**
**ಸಹಾಯಕ ಅಭಿಯಂತರರು,**

**(ಬಿ.ಆರ್ ರವಿಕುಮಾರ್)**
**ನೋಡಲ್ ಅಧಿಕಾರಿ ವಾರ್ಡ್-71**

ಪ್ರತಿಯನ್ನು:
1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ